ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 18-09-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು**

ಹಾಜರಿದ್ದ ಸದಸ್ಯರು,

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ಪುಷ್ಪ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29,
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)

ಹಾಜರಿದ್ದ ಅಧಿಕಾರಿಗಳು

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
7. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
8. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
9. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
10. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

ಸಭೆಯ ನಡವಳಿಗಳು

1) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ರಾಮಯ್ಯ ಬಡಾವಣೆಯಲ್ಲಿ ಒಳಚರಂಡಿ ಚೇಂಬರ್ಸ್ ಮೇಲೆ ಡಾಂಬರೀಕರಣ ಮಾಡಿದ್ದು, ಚೇಂಬರ್‌ಗಳನ್ನು ಗುರುತಿಸುವುದು ಕಷ್ಟಕರವಾಗಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಅಂತಹ ರಸ್ತೆಗಳಲ್ಲಿ ಪರಿಶೀಲನೆ ಮಾಡಿ, ಒಳಚರಂಡಿ ಚೇಂಬರ್‌ಗಳನ್ನು ಗುರುತಿಸಿ, ಬಣ್ಣದಿಂದ ಮಾರ್ಕ್ ಮಾಡಲಾಗವುದು ಎಂದು ಸಭೆಗೆ ತಿಳಿಸಿದರು.

2) ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಹೆಚ್.ಬಿ.ಆರ್ 1ನೇ ಬ್ಲಾಕ್, ಹಾಗೂ ಇತರೆ ರಸ್ತೆಗಳಲ್ಲಿ



Scanned with CamScanner

ಬೆಸ್ಕಾಂ ಇಲಾಖೆಯವರು ಭೂಗತ ಕೇಬಲ್‌ಗಳನ್ನು ಅಳವಡಿಸುತ್ತಿದ್ದು, ರಸ್ತೆಗುಂಡಿಗಳು ಉದ್ಭವವಾಗಿರುತ್ತವೆ. ಅವುಗಳನ್ನು ಕೂಡಲೇ ಮುಚ್ಚಲು ಕ್ರಮ ಕೈಗೊಳ್ಳಲು ಸಭಾ ಗಮನಕ್ಕೆ ತಂದಾಗ, ಈ ಬಗ್ಗೆ ಚರ್ಚಿಸಲಾಗಿ, ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಭಿಯಂತರರು, ಭೂಗತ ಕೇಬಲ್ ಅಳವಡಿಸುವ ಕಾಮಗಾರಿ ಪೂರ್ಣಗೊಳಿಸಿದ ತಕ್ಷಣ ರಸ್ತೆಗುಂಡಿಗಳನ್ನು ಕ್ರಮಬದ್ಧವಾಗಿ ಮುಚ್ಚಲಾಗುವುದು ಎಂದು ಸಭೆಗೆ ತಿಳಿಸಿದರು.

3) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,</u> ವಾರ್ಡಿನಲ್ಲಿರುವ ಉದ್ಯಾನವನಗಳಲ್ಲಿ ಸ್ವಚ್ಛತೆ ಕೈಗೊಳ್ಳಲು ಕ್ರಮ ವಹಿಸಲು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ ತೋಟಗಾರಿಕಾ ಇಲಾಖೆ ಸಿಬ್ಬಂದಿ ಈಗಾಗಲೇ ಹಲವು ಪಾರ್ಕ್‌ಗಳಲ್ಲಿ ಸ್ವಚ್ಛತೆ ಕೈಗೊಂಡಿದ್ದು, ಉಳಿದ ಉದ್ಯಾನವನಗಳಲ್ಲಿ ಸ್ವಚ್ಛತೆಯನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

4) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,</u> ಕಮ್ಮನಹಳ್ಳಿ ಮತ್ತು 5ನೇ ಮುಖ್ಯರಸ್ತೆಗಳಲ್ಲಿ ಸುಮಾರು ಬೀದಿ ದೀಪಗಳು ಉರಿಯಿತ್ತಿರುವುದಿಲ್ಲ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಬೀದಿದೀಪಗಳ ವಿಭಾಗದ ಅಭಿಯಂತರರು, ಕೂಡಲೇ ಬೀದಿದೀಪಗಳನ್ನು ದುರಸ್ತಿಪಡಿಸಲಾಗುವುದು ಹಾಗೂ ದುರಸ್ತಿಯಲ್ಲಿರುವ ಟೈಮರ್‌ಗಳನ್ನು ಸಹ ದುರಸ್ತಿಪಡಿಸಲಾಗುವುದು ಎಂದು ಪ್ರಸ್ತುತ ಹೊಸ ಫಿಟ್ಟಿಂಗ್‌ಗಳನ್ನು ಅಳವಡಿಸಲು ದಾಸ್ತಾನು ಇರುವುದಿಲ್ಲವೆಂದು ಸಭೆಗೆ ತಿಳಿಸಿದರು.

5) <u>ಡಾ|| ಪುಷ್ಪ ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ,</u> ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ವಾರ್ಡ್ ಕಛೇರಿಯ ಆಸ್ಪತ್ರೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸತತವಾಗಿ ನಡೆಸುತ್ತಿದ್ದು, ಒಟ್ಟು 12 ಸಕ್ರಿಯ ಪ್ರಕರಣಗಳಲ್ಲಿ 11 ಹೋಮ್ ಐಸೋಲೇಷನ್, 01 ಜನ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಮಾಡಲಾಗುತ್ತಿರುತ್ತದೆ. ಪ್ರಸ್ತುತ 56000 ಸಾರ್ವಜನಿಕರಿಗೆ ಪರೀಕ್ಷೆ ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 35240 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar. P.
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

<u>ಪ್ರತಿಯನ್ನು</u>

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

ಜಂಟಿ ಆಯುಕ್ತರು (ಪೂರ್ವ)
ಮಹಾನಗರ ಪಾಲಿಕೆ :
ನಂ.........
ದಿನಾಂಕ 28/09/2021

28/9/21



Scanned with CamScanner